# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 54 |
| 2] ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ಹರೀಶ್ ಕುಮಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3] ಉತ್ತರಿಸುವ ದಿನಾಂಕ | : | 13/02/2023 |
| 4] ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಮಂಜೂರಾಗಿರುವ ಮತ್ತು ಹೊಸದಾಗಿ ಸೃಜಿಸಲಾಗಿರುವ ಒಟ್ಟು CPI, PSI, HC ಹಾಗೂ PC ಹುದ್ದೆಗಳ ಸಂಖ್ಯೆ ಎಷ್ಟು;</td><td>ರಾಜ್ಯದಲ್ಲಿ ಮಂಜೂರಾಗಿರುವ ಮತ್ತು ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಸೃಜಿಸಲಾಗಿರುವ ಒಟ್ಟು CPI, PSI, HC ಮತ್ತು PC ಹುದ್ದೆಗಳ ಮಾಹಿತಿ ಈ ಕೆಳಗಿನಂತಿರುತ್ತದೆ.
<table>
<tr><th>ಕ್ರ ಸಂ</th><th>ಹುದ್ದೆ</th><th>ಮಂಜೂರಾಗಿರುವ ಹುದ್ದೆಗಳು</th><th>ಹೊಸದಾಗಿ ಸೃಜಿಸಿರುವ ಹುದ್ದೆಗಳು</th></tr>
<tr><td>1</td><td>CPI</td><td>1277</td><td>10</td></tr>
<tr><td>2</td><td>PSI</td><td>3598</td><td>15</td></tr>
<tr><td>3</td><td>HC</td><td>17812</td><td>67</td></tr>
<tr><td>4</td><td>PC</td><td>35182</td><td>103</td></tr>
<tr><td colspan="2">TOTAL</td><td>57869</td><td>195</td></tr>
</table>
</td></tr>
<tr><td>ಆ)</td><td>ಪ್ರಸ್ತುತ ಎಷ್ಟು ಹುದ್ದೆಗಳು ಖಾಲಿ ಇವೆ ಹಾಗೂ ಖಾಲಿ ಉಳಿದಿರುವ ಹುದ್ದೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td><td>ಪ್ರಸ್ತುತ ಇಲಾಖೆಯಲ್ಲಿ 4104 ಹುದ್ದೆಗಳು ಖಾಲಿ ಇರುತ್ತದೆ. ಖಾಲಿ ಉಳಿದಿರುವ ಬ್ಯಾಕ್‌ಲಾಗ್ ಹುದ್ದೆಗಳಲ್ಲಿ ಈಗಾಗಲೇ 91 ಹುದ್ದೆಗಳಿಗೆ ನೇಮಕಾತಿ ಕೈಗೊಳ್ಳಲು ಅಧಿಸೂಚನೆ ಹೊರಡಿಸಲಾಗಿರುತ್ತದೆ. ಇನ್ನು 75 ಬ್ಯಾಕ್‌ಲಾಗ್ ಹುದ್ದೆಗಳಲ್ಲಿ 09 (HC) ಮುಂಬಡ್ತಿ ಹುದ್ದೆಗಳಾಗಿದ್ದು, ಸದರಿ ಹುದ್ದೆಗಳಿಗೆ ಅರ್ಹ ಸಿಬ್ಬಂದಿಗಳನ್ನು ಮುಂಬಡ್ತಿ ನೀಡುವ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಉಳಿದ 66 ನೇರ ನೇಮಕಾತಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಮುಂದಿನ ನೇಮಕಾತಿ ಪ್ರಕ್ರಿಯೆಯಲ್ಲಿ ತುಂಬಿಕೊಳ್ಳಲಾಗುವುದು.<br><br>91 ಹುದ್ದೆಗಳನ್ನು ಭರ್ತಿ ಮಾಡಲು ತಗೆದುಕೊಳ್ಳಲಾದ ಕ್ರಮದ ವಿವರಗಳು ಈ ಕೆಳಕಂಡಂತಿರುತ್ತದೆ<br><br>➢ ಕಲ್ಯಾಣ ಕರ್ನಾಟಕ ಪ್ರದೇಶದ ಪೊಲೀಸ್ ಕಾನ್ಸ್‌ಟೇಬಲ್ ಸಿವಿಲ್ (ಪುರುಷ ಮತ್ತು ಮಹಿಳಾ) ಮತ್ತು (ತೃತೀಯಲಿಂಗ ಪುರುಷ ಮತ್ತು ಮಹಿಳಾ) ಹಾಗೂ ಸೇವಾನಿರತ ಮತ್ತು ಬ್ಯಾಕ್‌ಲಾಗ್–454 ಖಾಲಿ ಹುದ್ದೆಗಳಿಗೆ ಈಗಾಗಲೇ ಸಂಖ್ಯೆ:06/ನೇಮಕಾತಿ–4/2022–23, ದಿನಾಂಕ:12.10.2022ರಲ್ಲಿ ಅಧಿಸೂಚನೆ ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br>➢ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ ಮತ್ತು ಮಹಿಳಾ) ಮತ್ತು (ತೃತೀಯಲಿಂಗ ಪುರುಷ ಮತ್ತು ಮಹಿಳಾ) ಹಾಗೂ ಸೇವಾನಿರತ ಮತ್ತು ಬ್ಯಾಕ್‌ಲಾಗ್ (ಮಿಕ್ಕುಳಿದ ವೃಂದ)–1137 ಹುದ್ದೆಗಳಿಗೆ ಈಗಾಗಲೇ ಸಂಖ್ಯೆ:10/ನೇಮಕಾತಿ–4/2022–23, ದಿ:12.10.2022ರಲ್ಲಿ ಅಧಿಸೂಚನೆ ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.</td></tr>
</table>

**ಸಂಖ್ಯೆ: ಹೆಚ್‌ಡಿ 15 ಪಿಓಪಿ 2023**

(ಆರಗ ಜ್ಞಾನೇಂದ್ರ)
ಗೃಹ ಸಚಿವರು.